(213)

## ಕರ್ನಾಟಕ ಸರ್ಕಾರದ ನಡವಳಿಗಳು

ವಿಷಯ: ನಿಪ್ಪಾಣಿ ಪಟ್ಟಣದ ಸ್ಥಳೀಯ ಯೋಜನಾ ಪ್ರದೇಶದ ಮಹಾಯೋಜನೆ (ಪ-1)ಕ್ಕೆ ಸರ್ಕಾರದ ಅಂತಿಮ ಅನುಮೋದನೆ ನೀಡುವ ಬಗ್ಗೆ.

ಓದಲಾಗಿದೆ:
1. ಸರ್ಕಾರದ ಆದೇಶ ಸಂ:ನಅಇ 173 ಬೆಮಪ್ರಾ2009, ದಿನಾಂಕ;13.07.2009
2. ನಿಪ್ಪಾಣಿ ನಗರ ಯೋಜನಾ ಪ್ರಾಧಿಕಾರದ ಪತ್ರ ಸಂಖ್ಯೆ:ನಯೋ/ಪ್ರಾನಿ/ಮಾಪ್ಲಾ(ಪ-1)/07/2010-11,ದಿ:07.06.2010
3. ನಿರ್ದೇಶಕರು ನಗರ ಯೋಜನಾ ಇಲಾಖೆ ಇವರ ಕಛೇರಿಯ ಏಕ ಕಡತ ಸಂಖ್ಯೆ: ನಗ್ರಾಯೋ (7)ಉನಿ(ಯೋ.ವಿ)ನಿಪ್ಪಾಣಿ/ಮ.ಯೋ(ಪ-1)ಅಂತಿಮ 2010, ದಿ:17.07.2010ರಲ್ಲಿ ನೀಡಿರುವ ಅಭಿಪ್ರಾಯ.

******

ಪ್ರಸ್ತಾವನೆ:

ಮೇಲೆ (1) ರಲ್ಲಿ ಓದಲಾದ ಸರ್ಕಾರದ ಆದೇಶದಲ್ಲಿ ನಿಪ್ಪಾಣಿ ಪಟ್ಟಣದ ಸ್ಥಳೀಯ ಯೋಜನಾ ಪ್ರದೇಶದ ಮಹಾಯೋಜನೆ (ಪ-1)ಕ್ಕೆ ತಾತ್ಕಾಲಿಕ ಅನುಮೋದನೆ ನೀಡಲಾಗಿದೆ.

ಮೇಲೆ ಓದಲಾದ (2)ರ ಪತ್ರದಲ್ಲಿ ಸದಸ್ಯ ಕಾರ್ಯದರ್ಶಿಗಳು, ನಿಪ್ಪಾಣಿ ನಗರ ಯೋಜನಾ ಪ್ರಾಧಿಕಾರ, ಇವರು ನಿಪ್ಪಾಣಿ ಪಟ್ಟಣದ ಸ್ಥಳೀಯ ಯೋಜನಾ ಪ್ರದೇಶಕ್ಕೆ ತಯಾರಿಸಿರುವ ಮಹಾ ಯೋಜನೆ (ಪ-1)ಯನ್ನು ಕರ್ನಾಟಕ ನಗರ ಮತ್ತು ಗ್ರಾಮಾಂತರ ಯೋಜನಾ ಕಾಯ್ದೆ 1961 ಕಲಂ 13(1)ರನ್ವಯ ಸರ್ಕಾರದ ಅಂತಿಮ ಅನುಮೊದನೆಗಾಗಿ ಸಲ್ಲಿಸಿರುತ್ತಾರೆ.

ಮೇಲೆ ಓದಲಾದ (3)ರ ಏಕ ಕಡತದಲ್ಲಿ ನಿರ್ದೇಶಕರು, ನಗರ ಯೋಜನಾ ಇಲಾಖೆ ಇವರು ನಿಪ್ಪಾಣಿ ಪಟ್ಟಣದ ಜನಸಂಖ್ಯೆಯು 2021ರಲ್ಲಿ 1,00,000 ಗಳಷ್ಟು ಬೆಳವಣಿಗೆಯಾಗುವುದಾಗಿ ಅಂದಾಜಿಸಿ ಮಹಾ ಯೋಜನೆಯನ್ನು ರೂಪಿಸಲಾಗಿದೆ . ನಿಪ್ಪಾಣಿ ಪಟ್ಟಣದ ಸ್ಥಳೀಯ ಯೋಜನಾ ಪ್ರದೇಶದ 7175.31 ಹೆಕ್ಟೇರ್ ಪ್ರದೇಶದಲ್ಲಿ 1504.49 ಹೆಕ್ಟೇರ್ ಪ್ರದೇಶವನ್ನು ನಗರದ ಅಭಿವೃದ್ಧಿಗಾಗಿ ನಗರೀಕರಣ ಎಲ್ಲೆಯೆಂದು ಪ್ರಸ್ತಾಪಿಸಿ, ಕರ್ನಾಟಕ ನಗರ ಮತ್ತು ಗ್ರಾಮಾಂತರ ಯೋಜನಾ ಕಾಯ್ದೆ 1961ರ ಕಲಂ (12)ರಲ್ಲಿ ನಿಗಧಿಪಡಿಸಿರುವ ಅಂಶಗಳನ್ನು ಪರಿಗಣಿಸಿ, ಪ್ರಸ್ತಾಪಿತ 1456.76 ಹೆಕ್ಟೇರ್ ಪ್ರದೇಶದಲ್ಲಿ ವಸತಿಗಾಗಿ 731.21 ಹೆಕ್ಟೇರ್ (ಶೇ.50.19),ವಾಣಿಜ್ಯಕ್ಕಾಗಿ 84.21 ಹೆಕ್ಟೇರ್(ಶೇ.5.78),ಕೈಗಾರಿಕೆಗಾಗಿ 54.50 ಹೆಕ್ಟೇರ್ (ಶೇ.3.74)ಸಾರ್ವಜನಿಕ /ಅರೆ ಸಾರ್ವಜನಿಕ ಉಪಯೋಗಕ್ಕೆ 57.05 ಹೆಕ್ಟೇರ್ (ಶೇ.3.99)ಉದ್ಯಾನವನ/ಬಯಲು ಜಾಗೆಗಳಿಗೆ 93.99 ಹೆಕ್ಟೇರ್ (6.45),ನಾಗರೀಕ ಸೌಲಭ್ಯಕ್ಕಾಗಿ 0.61 ಹೆಕ್ಟೇರ್ (ಶೇ.0.04) ಹಾಗೂ ಸಾರಿಗೆ / ಸಂಪರ್ಕ ವಲಯಕ್ಕೆ 435.19 ಹೆಕ್ಟೇರ್ (ಶೇ.29.88) ಪ್ರದೇಶವನ್ನು ನಿಗಧಿಪಡಸಲಾಗಿದೆ ಮಹಾ ಯೋಜನೆ (ಪ-1)ಯನ್ನು ಅನುಷ್ಠಾನಕ್ಕೆ ತರಲು ಅಗತ್ಯವಿರುವ ವಲಯ ನಿಯಮಾವಳಿಗಳನ್ನು ರೂಪಿಸಲಾಗಿದ್ದು, ಸದರಿ ಮಹಾಯೋಜನೆಗೆ ಕರ್ನಾಟಕ ನಗರ ಮತ್ತು ಗ್ರಾಮಾಂತರ ಯೋಜನಾ ಕಾಯ್ದೆ 1961ರ ಕಲಂ 13(3)ರನ್ವಯ ಸರ್ಕಾರದ ಅಂತಿಮ ಅನುಮೋದನೆ ನೀಡಲು ಶಿಫಾರಸ್ಸು ಮಾಡಿ ಪ್ರಸ್ತಾವನೆಯನ್ನು ಸರ್ಕಾರಕ್ಕೆ ಸಲ್ಲಿಸಿರುತ್ತಾರೆ.

ಪ್ರಸ್ತಾವನೆಯನ್ನು ಕೂಲಂಕಷವಾಗಿ ಪರಿಶೀಲಿಸಿ, ಈ ಕೆಳಕಂಡ ಆದೇಶವನ್ನು ಹೊರಡಿಸಲಾಗಿದೆ.

**ಸರ್ಕಾರದ ಆದೇಶ ಸಂಖ್ಯೆ:ನಅಇ 227 ಬೆಮಪ್ರಾ 2010, ಬೆಂಗಳೂರು ದಿನಾಂಕ;28.09.2010**

ಪ್ರಸ್ತಾವನೆಯಲ್ಲಿ ವಿವರಿಸಿರುವ ಅಂಶಗಳ ಹಿನ್ನೆಲೆಯಲ್ಲಿ ನಿಪ್ಪಾಣಿ ಪಟ್ಟಣದ ಸ್ಥಳೀಯ ಯೋಜನಾ ಪ್ರದೇಶಕ್ಕೆ ರೂಪಿಸಿರುವ ಮಹಾ ಯೋಜನೆ (ಪ-1)ಗೆ ಕರ್ನಾಟಕ ನಗರ ಮತ್ತು ಗ್ರಾಮಾಂತರ ಯೋಜನಾ ಕಾಯ್ದೆ 1961ರ ಕಲಂ 13(3)ರನ್ವಯ ಅಂತಿಮ ಅನುಮೋದನೆಯನ್ನು ನೀಡಲಾಗಿದೆ.

ಮಹಾ ಯೋಜನೆ (ಪರಿಷ್ಕೃತ–1)ಗೆ ತಾತ್ಕಾಲಿಕ ಅನುಮೋದನೆ ನೀಡಿದ ಗುರುತಾಗಿ ವರದಿ ಹಾಗೂ ನಕ್ಷೆಗಳ ಮೇಲೆ ಸರ್ಕಾರದ ಮುದ್ರೆಯನ್ನು ಹಾಕಲಾಗಿದೆ.

ಷರತ್ತು– ಈ ಆದೇಶದ ದಿನಾಂಕದಿಂದ 2 ವರ್ಷಗಳ ವರೆಗೆ ಪ್ರಾಧಿಕಾರವು ಯಾವುದೇ ಭೂ ಉಪಯೋಗ ಬದಲಾವಣೆಯ ಪ್ರಸ್ತಾವನೆಗಳನ್ನು ಸರ್ಕಾರಕ್ಕೆ ಸಲ್ಲಿಸಬಾರದು.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ,

(ಎಂ.ಎಂ.ಹಿರೇಮಠ)
ಸರ್ಕಾರದ ಅಧೀನ ಕಾರ್ಯದರ್ಶಿ,
ನಗರಾಭಿವೃದ್ಧಿ ಇಲಾಖೆ

ಇವರಿಗೆ:

ಸಂಕಲನಕಾರರು, ಕರ್ನಾಟಕ ರಾಜ್ಯಪತ್ರ ಸರ್ಕಾರಿ ಮುದ್ರಣಾಲಯ, ಬೆಂಗಳೂರು ಇವರಿಗೆ ಮುಂದಿನ ವಿಶೇಷ ರಾಜ್ಯಪತ್ರದಲ್ಲಿ ಪ್ರಕಟಿಸಲು.

ಪ್ರತಿಯನ್ನು:

1) ಜಿಲ್ಲಾಧಿಕಾರಿಗಳು, ಬೆಳಗಾವಿ ಜಿಲ್ಲೆ, ಬೆಳಗಾವಿ.
2) ನಿರ್ದೇಶಕರು, ನಗರ ಯೋಜನಾ ಇಲಾಖೆ, ಬೆಂಗಳೂರು.
3) ಸದಸ್ಯ ಕಾರ್ಯದರ್ಶಿಗಳು, ನಿಪ್ಪಾಣಿ ನಗರ ಯೋಜನಾ ಪ್ರಾಧಿಕಾರ, ನಿಪ್ಪಾಣಿ.
4) ನಗರ ಯೋಜನಾ ಸಹಾಯಕ ನಿರ್ದೇಶಕರು, ನಗರ ಯೋಜನಾ ಇಲಾಖೆ, ನಿಪ್ಪಾಣಿ.
5) ಮಾನ್ಯ ನಗರಾಭಿವೃದ್ಧಿ ಸಚಿವರ ಆಪ್ತ ಕಾರ್ಯದರ್ಶಿ, ವಿಧಾನ ಸೌಧ, ಬೆಂಗಳೂರು.
6) ಸರ್ಕಾರದ ಕಾರ್ಯದರ್ಶಿಗಳ/ಉಪ ಕಾರ್ಯದರ್ಶಿಗಳ ಆಪ್ತ ಸಹಾಯಕರು. ನಗರಾಭಿವೃದ್ಧಿ ಇಲಾಖೆ.
7) ಶಾಖಾ ರಕ್ಷಾ ಕಡತ/ಹೆಚ್ಚುವರಿ ಪ್ರತಿಗಳು.